**<u>ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಸ್ ವ್ಹಿ ಸಂಕನೂರ ಇವರು ಮಂಡಿಸಿರುವ ನಿಯಮ-72ಕ್ಕೆ ಉತ್ತರ</u>**

**ವಿಷಯ:-**

**ರಾಜ್ಯ ಸರ್ಕಾರ ನೇಮಕಾತಿಗಾಗಿ ಹೊಸದಾಗಿ ಜಾರಿಗೆ ತಂದಿರುವ ಆದೇಶ ಸಂಖ್ಯೆ.ಸಿ ಆ.ಸಿ 01ಸ.ಹಿ.ಮಾ2022 ದಿನಾಂಕ:28.12.2022 ಕ್ಕೆ ಸರ್ವೋಚ್ಚ ನ್ಯಾಯಾಲಯದಿಂದ ಮುಂದಿನ ಆದೇಶದವರೆಗೆ ಸರ್ಕಾರದ ಹೊಸ ಮೀಸಲಾತಿಯನ್ನು ಅನುಷ್ಠಾನಗೊಳಿಸುವಂತಿಲ್ಲ ಎಂದು ಮಧ್ಯಂತರ ಆದೇಶ ನೀಡಿರುತ್ತದೆ ಈ ಹಿನ್ನೆಲೆಯಲ್ಲಿ ಕಳೆದ 1 ವರ್ಷದಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ 2015ರ ಪೂರ್ವದಲ್ಲಿ ತೆರವಾಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡದೆ ಇರುವುದರಿಂದ ಬೋಧನಾ ಕಾರ್ಯಕ್ಕೆ ತೊಂದರೆ ಆಗಿರುವುದನ್ನು ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ ಹಾಗೂ ಇನ್ನಿತರೆ ಕಾರಣಗಳಿಂದ ದಿನಾಂಕ:31.12.2015ರವರೆಗೆ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ ಹಾಗೂ ಇನ್ನಿತರೆ ಕಾರಣಗಳಿಂದ ದಿನಾಂಕ:01.01.2016 ರಿಂದ 31.12.2020ರವರೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ.

**ಸಂಖ್ಯೆ: ಇಪಿ 138 ಎಸ್‌ಇಎಸ್ 2024**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**